# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ನವಗ್ರಹ ತೀರ್ಥ ಕ್ಷೇತ್ರ ಎಸ್.ಡಿ.ಎಂ. ಮಠ ಟ್ರಸ್ಟ್‌ನ ಎ.ಜಿ.ಎಂ. ಕಾಲೇಜ್ ಆಫ್ ಫಾರ್ಮಸಿ, ವರೂರು, ಹುಬ್ಬಳ್ಳಿ ಇಲ್ಲಿ ಹೊಸದಾಗಿ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ

1. ಕುಲಸಚಿವರು, ರಾ.ಆ.ವಿ.ವಿಶ್ವವಿದ್ಯಾಲಯ, ಬೆಂಗಳೂರು ಇವರ ಪ್ರಸ್ತಾವನೆ ಸಂಖ್ಯೆ: ACA/AFF/F/PH-139/2019-20, ದಿನಾಂಕ: 16.07.2019.
2. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಇವರ ವರದಿ ಸಂಖ್ಯೆ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ ಇವರ ವರದಿ ಸಂಖ್ಯೆ:ಔನಿಇ/47/ಯೋಜನೆ/2019-20, ದಿನಾಂಕ: 31.07.2019.
3. ದಿನಾಂಕ:01.08.2019ರಂದು ನಡೆದ ಉನ್ನತ ಮಟ್ಟದ ಸಮಿತಿ ಸಭೆಯ ನಡವಳಿಗಳು.

****

## ಪ್ರಸ್ತಾವನೆ

ಮೇಲೆ ಓದಲಾದ ಕ್ರ.ಸಂ (1) ಪ್ರಸ್ತಾವನೆಯಲ್ಲಿ, ಕುಲಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಶ್ರೀ ನವಗ್ರಹ ತೀರ್ಥ ಕ್ಷೇತ್ರ ಎಸ್.ಡಿ.ಎಂ. ಮಠ ಟ್ರಸ್ಟ್‌ನ ಎ.ಜಿ.ಎಂ. ಕಾಲೇಜ್ ಆಫ್ ಫಾರ್ಮಸಿ, ವರೂರು, ಹುಬ್ಬಳ್ಳಿ ಇಲ್ಲಿ 2019-20ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಹೊಸದಾಗಿ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅಫಿಲಿಯೇಷನ್ ನೀಡಿದ್ದು, ಇದನ್ನು ಪರಿಗಣಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (2)ರ ವರದಿಯಲ್ಲಿ, ಔಷಧ ನಿಯಂತ್ರಕರು (ಪ್ರ), ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ಶ್ರೀ ನವಗ್ರಹ ತೀರ್ಥ ಕ್ಷೇತ್ರ ಎಸ್.ಡಿ.ಎಂ. ಮಠ ಟ್ರಸ್ಟ್‌ನ ಎ.ಜಿ.ಎಂ. ಕಾಲೇಜ್ ಆಫ್ ಫಾರ್ಮಸಿ, ವರೂರು, ಹುಬ್ಬಳ್ಳಿ ಇಲ್ಲಿ ಹೊಸದಾಗಿ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸುವುದಕ್ಕೆ ಸಂಬಂಧಿಸಿದಂತೆ, ಪ್ರಾಂಶುಪಾಲರು, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಬೆಂಗಳೂರು ಇವರು ಸಲ್ಲಿಸಿರುವ ಪರಿವೀಕ್ಷಣಾ ವರದಿಯನುಸಾರ ಸದರಿ ಸಂಸ್ಥೆಯು 2019-20ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅಗತ್ಯವಾದ ಮೂಲಭೂತ ಸೌಲಭ್ಯಗಳನ್ನು ಹೊಂದಿದ್ದು, ಸದರಿ ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ ಉನ್ನತ ಮಟ್ಟದ ಸಮಿತಿಯಲ್ಲಿ ಪರಿಶೀಲಿಸಿ, ತೀರ್ಮಾನಿಸಬಹುದಾಗಿದೆ ಎಂದು ಅಭಿಪ್ರಾಯ ನೀಡಿರುತ್ತಾರೆ.

PRINCIPAL
AGM College Pharmac
VARUR-581207. Tq:Hubl
Dist:Dharwad. State:Karnata

ಮೇಲೆ ಓದಲಾದ ಕ್ರ.ಸಂ (3)ರ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ, ಈ ಸಂಸ್ಥೆಗೆ 2019-20ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಹೊಸದಾಗಿ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಲು ಶಿಫಾರಸು ಮಾಡಲಾಗಿದೆ.

ಕುಲಸಚಿವರ ಪ್ರಸ್ತಾವನೆ, ಔಷಧ ನಿಯಂತ್ರಕರ ವರದಿ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಶ್ರೀ ನವಗ್ರಹ ತೀರ್ಥ ಕ್ಷೇತ್ರ ಎಸ್.ಡಿ.ಎಂ. ಮಠ ಟ್ರಸ್ಟನ ವ್ಹಿ.ಜಿ.ಎಂ. ಕಾಲೇಜ್ ಆಫ್ ಫಾರ್ಮಸಿ, ವರೂರು, ಹುಬ್ಬಳ್ಳಿ ಇಲ್ಲಿ 2019-20ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಹೊಸದಾಗಿ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಪಿ.ಸಿ.ಐ ಮತ್ತು ಎ.ಐ.ಸಿ.ಟಿ.ಇ. ನವದೆಹಲಿ ಹಾಗೂ ಅಗತ್ಯವಿರುವ ಇತರೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆಯನ್ನು ಪಡೆಯುವ ಷರತ್ತಿಗೊಳಪಟ್ಟು ಅನುಮತಿ ನೀಡಲು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 41 ಪಿಟಿಡಿ 2019/ಇ.ಆ. ಬೆಂಗಳೂರು,**
**ದಿನಾಂಕ:14.08.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ನವಗ್ರಹ ತೀರ್ಥ ಕ್ಷೇತ್ರ ಎಸ್.ಡಿ.ಎಂ. ಮಠ ಟ್ರಸ್ಟನ ವ್ಹಿ.ಜಿ.ಎಂ. ಕಾಲೇಜ್ ಆಫ್ ಫಾರ್ಮಸಿ, ವರೂರು, ಹುಬ್ಬಳ್ಳಿ ಇಲ್ಲಿ 2019-20ನೇ ಶೈಕ್ಷಣಿಕ ಸಾಲಿನಿಂದ 60 (ಅರವತ್ತು) ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಹೊಸದಾಗಿ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಬಿ.ಫಾರ್ಮಸಿ ಕಾಲೇಜು/ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸುವ ಮೊದಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಮತ್ತು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ ಇವರಿಂದ ಹಾಗೂ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮೋದನೆ/ಅನುಮತಿಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಎಲ್ಲಾ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.

...3

2. The Member Secretary, All India Council for Technical Education, Nelson Mandela Marg, Vasanth Kunj, New Delhi – 110 067.
3. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು-41.
5. ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ.ಕಾಳಿಂಗರಾವ್ ರಸ್ತೆ, ಬೆಂಗಳೂರು-560 027.
6. ಪ್ರಾಂಶುಪಾಲರು, ಶ್ರೀ ನವಗ್ರಹ ತೀರ್ಥ ಕ್ಷೇತ್ರ ಎಸ್.ಡಿ.ಎಂ. ಮಠ ಟ್ರಸ್ಟ್‌ನ ಎ.ಜಿ.ಎಂ. ಕಾಲೇಜ್ ಆಫ್ ಫಾರ್ಮಸಿ, ವರೂರು, ಹುಬ್ಬಳ್ಳಿ.

<u>ಪ್ರತಿಗಳು:-</u>

1. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

A.G.M. College Of Pharmacy
Hubbli-Tq
Dharwad-Dt.
VARUR-581207

PRINCIPAL
AGM College Pharmacy
VARUR-581207. Tq:Hubli,
Dist:Dharwad. State:Karnataka